# ಅಲೆಮಾರಿ ಗೋಂಧಳಿ ಸಮಾಜಕ್ಕೂ ಸರ್ಕಾರ ವಿಶೇಷ ಪ್ಯಾಕೇಜ್ ನೀಡಲು ಮನವಿ



ಬಳ್ಳಾರಿ,ಮೇ.09-ಲಾಕ್ ಡೌನ್ ಹಿನ್ನೆಲೆಯಲ್ಲಿ ಸಂಕಷ್ಟಕ್ಕೆ ಒಳಗಾಗಿರುವ ಅಲೆಮಾರಿ ಗೋಂಧಳಿ ಸಮಾಜಕ್ಕೂ ಕೂಡ ರಾಜ್ಯ ಸರ್ಕಾರ ವಿಶೇಷ ಪ್ಯಾಕೇಜ್ ನೀಡಬೇಕೆಂದು ಗೋಂಧಳಿ ಸಮಾಜ ಸಂಘದ ಮುಖಂಡರು ಒತ್ತಾಯಿಸಿದ್ದಾರೆ.

ಅಖಂಡ ಕರ್ನಾಟಕ ಗೋಂಧಳಿ ಸಮಾಜ ಸಂಘ ಮತ್ತು ಅಖಿಲ ಕರ್ನಾಟಕ ಗೋಂಧಳಿ ಸಮಾಜ ಸಂಘದ ಜಿಲ್ಲಾ ಪದಾಧಿಕಾರಿಗಳಾದ ನಾಗರಾಜ್ ಮತ್ತು ಗುರುಪ್ರಸಾದ್ ವಾಕೋಡೆ ಇಂದು ತಹಶೀಲ್ದಾರ್ ಮೇಹತಾ ಅವರನ್ನು ಭೇಟಿಯಾಗಿ, ಮುಖ್ಯಮಂತ್ರಿ ಬಿಎಸ್ ಯಡಿಯೂರಪ್ಪನವರು ಲಾಕ್ ಡೌನ್ ಹಿನ್ನೆಲೆಯಲ್ಲಿ ಸಂಕಷ್ಟಕ್ಕೊಳಗಾದವರಿಗೆ 1610 ಕೋಟಿ ರೂ. ವಿಶೇಷ ಪ್ಯಾಕೇಜ್ ನೀಡಿದ್ದು ಅಭಿನಂದನೀಯ. ಅಲೆಮಾರಿ ಸಮುದಾಯಕ್ಕೆ ಸೇರಿದ ಲಕ್ಷಾಂತರ ಕುಟುಂಬಗಳೂ ಸಹ ಜೀವನ ನಿರ್ವಹಣೆ ಮಾಡಲಾಗದೇ ತೊಂದರೆಗೊಳಗಾಗಿವೆ. ಗೋಂಧಳಿ, ಬುಡಬುಡಿಕೆ ಸಮುದಾಯದ ಅಲೆಮಾರಿ ಜನರು ಹೊಟ್ಟೆಗೆ ಹಿಡಿ ಅನ್ನ ಇಲ್ಲದೇ ದಯನೀಯ ಸ್ಥಿತಿ ತಲುಪಿದ್ದಾರೆ. ಗೊಂದಲ ಹಾಡುತ್ತ, ಬುಡಬುಡಿಕೆ ನುಡಿಸುತ್ತ ಭಿಕ್ಷಾಟನೆ ಮಾಡುವವರು ತೊಂದರೆಗೀಡಾಗಿದ್ದಾರೆ.

ಕೌದಿ ಹೊಲಿಯುವವರು, ಪಾತ್ರೆ ವ್ಯಾಪಾರ, ಕಬ್ಬಿಣ ಗುಜರಿ, ಹಳೇ ತಗಡು, ಹಳೇ ಸಾಮಾನು ಮೋಡಕಾ, ತಳ್ಳು ಗಾಡಿ, ಬೈಕ್ ಮೂಲಕ ಹಳ್ಳಿ ಹಳ್ಳಿಗೆ ತೆರಳಿ ವ್ಯಾಪಾರ ಮಾಡುವ ಜನರ ಬದುಕು ದುಸ್ತರವಾಗಿದೆ. ಹಳ್ಳಿಗಳಲ್ಲಿ ವ್ಯಾಪಾರ ಮಾಡಲು ಗ್ರಾಮಸ್ಥರು ಅವಕಾಶ ಮಾಡಿಕೊಡುತ್ತಿಲ್ಲ. ಜ್ಯೋತಿಷ್ಯ, ಗಿಣಿ ಶಾಸ್ತ್ರ ಹೇಳುವವರದ್ದೂ ಇದೇ ಸಮಸ್ಯೆ ಆಗಿದೆ. ದೈನಂದಿನ ಜೀವನ ನಡೆಸಲು ಕಷ್ಟಕರವಾಗಿದೆ. ಹೀಗಾಗಿ ಮುಖ್ಯಮಂತ್ರಿಗಳು ಮುಂದಿನ ಅಧಿವೇಶನಕ್ಕೂ ಮೊದಲು ಅಲೆಮಾರಿ ಜನಾಂಗದ ಗೋಂಧಳಿ ಹಾಗೂ ಬುಡಬುಡಿಕೆ ಸಮುದಾಯದ ಜ್ಯೋತಿಷ್ಯ, ಗಿಣಿ ಶಾಸ್ತ್ರ, ಗುಜರಿ, ಭಾಂಡೆ, ಗುಜರಿ ವ್ಯಾಪಾರ ಮಾಡುವ ಜನರಿಗೆ ವಿಶೇಷ ಪ್ಯಾಕೇಜ್ ನೀಡಬೇಕು. ಸವಿತಾ ಸಮಾಜ ಮತ್ತು ಮಡಿವಾಳ ಸಮಾಜದವರಿಗೆ ನೀಡಿದಂತೆ ಈ ಸಮುದಾಯದ ಪ್ರತಿಯೊಬ್ಬರ ಬ್ಯಾಂಕ್ ಖಾತೆಗೂ ತಲಾ 10 ಸಾವಿರ ರೂ.ಜಮೆ ಮಾಡುವ ಮೂಲಕ ಆರ್ಥಿಕವಾಗಿ ಉತ್ತೇಜನ ನೀಡಬೇಕೆಂದು ಒತ್ತಾಯಿಸಿದ್ದಾರೆ.ಈ ಸಂದರ್ಭದಲ್ಲಿ ವಾಕೋಡೆ ರಾಘವೇಂದ್ರ, ವಿನೋದ್ ಸಿಂಥೆ, ಪ್ರವೀಣ್ ವಾಕೋಡೆ, ಚಿರಂಜೀವಿ, ಚಂದ್ರಶೇಖರ್ ಸಿಂಥೆ, ಬಿ.ಧನರಾಜ್ ಮತ್ತಿತರರು ಇದ್ದರು.

# ಸೋಮವಾರದಿಂದ ಹುಬ್ಬಳ್ಳಿಯಲ್ಲಿಯೂ ಲಾಕ್ ಡೌನ್ ಸಡಿಲಿಕೆ: ಸೀಲ್ ಡೌನ್ ಪ್ರದೇಶ ಹೊರತುಪಡಿಸಿ ಉಳಿದೆಡೆ ಆರ್ಥಿಕ ಚಟುವಟಿಕೆಗಳಿಗೆ ಅವಕಾಶ : ಸಚಿವರಾದ ಜಗದೀಶ ಶೆಟ್ಟರ್

ಧಾರವಾಡ ಮೇ.09 : ಕೊರೊನಾ ನಯಂತ್ರಣಕ್ಕಾಗಿ ಜಾರಿಯಾಗಿರುವ ಲಾಕ್ ಡೌನ್ ನಂದ ಹುಬ್ಬಳ್ಳಿ ಶಹರ ಹೊರತುಪಡಿಸಿ ಜಿಲ್ಲೆಯಾದ್ಯಂತ ಈಗಾಗಲೇ ಆರ್ಥಿಕ ಚಟುವಟಿಕೆಗಳು ಪ್ರಾರಂಭವಾಗಿವೆ. ಬರುವ ಸೋಮವಾರ ಮೇ.11 ರಿಂದ ಹುಬ್ಬಳ್ಳಿಯ ಸೀಲ್ ಡೌನ್ ಪ್ರದೇಶ ಹೊರತುಪಡಿಸಿ ಉಳಿದೆಡೆ ವಾಣಿಜ್ಯ, ವಹಿವಾಟುಗಳನ್ನು ನಡೆಸಲು ಅವಕಾಶ ಕಲ್ಪಿಸಲು ಆದೇಶ ಹೊರಡಿಸಲಾಗುವುದು ಎಂದು ಬೃಹತ್, ಮಧ್ಯಮ ಕೈಗಾರಿಕೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಜಗದೀಶ ಶೆಟ್ಟರ್ ಹೇಳಿದ್ದಾರೆ. ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಇಂದು ಕೊರೊನಾ ನಯಂತ್ರಣ ಮತ್ತು ಲಾಕ್ ಡೌನ್ ಸಡಿಲಿಕೆ ಕುರಿತ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಅಂಗಡಿ ಮತ್ತು ಮುಂಗಟ್ಟುಗಳ ಕಾಯ್ದೆ (Shops and Establishment Act) ಪ್ರಕಾರ ಸ್ಥಾಪನೆಯಾಗಿರುವ ಎಲ್ಲಾ ಅಗತ್ಯ ವಸ್ತುಗಳ ಪೂರೈಕೆಯ ವಾಣಿಜ್ಯ, ವಹಿವಾಟುಗಳು ಈಗಾಗಲೇ ಜಿಲ್ಲೆಯ ಧಾರವಾಡ, ಕಲಘಟಗಿ, ಅಳ್ನಾವರ, ಕುಂದಗೋಳ, ಅಣ್ಣಿಗೇರಿ ಹಾಗೂ ನವಲಗುಂದ ತಾಲ್ಲೂಕುಗಳಲ್ಲಿ ಪುನರಾರಂಭವಾಗಿವೆ.ಬರುವ ಸೋಮವಾರ ಮೇ 11 ರಿಂದ ಹುಬ್ಬಳ್ಳಿಯ ಸೀಲ್ ಡೌನ್ ಪ್ರದೇಶ ಹೊರತುಪಡಿಸಿ ಉಳಿದ ಎಲ್ಲಾ ಕಡೆಗಳಲ್ಲೂ ಕಿರಾಣಿ ಅಂಗಡಿ, ಹೊಟೆಲ್‌ಗಳಲ್ಲಿ ಪಾರ್ಸೆಲ್ ಸೇರಿದಂತೆ ವಿವಿಧ ವ್ಯಾಪಾರ ಚಟುವಟಿಕೆಗಳ ಪ್ರಾರಂಭಕ್ಕೆ ವಾರದ ಎಲ್ಲಾ ದಿನಗಳಲ್ಲಿಯೂ ಅವಕಾಶ ಕಲ್ಪಿಸಿ ಸಮರ್ಪಕ ಆದೇಶ ಹೊರಡಿಸಬೇಕು ಎಂದು ಜಿಲ್ಲಾಧಿಕಾರಿಗಳಿಗೆ ಸೂಚಿಸಿದರು.

ಲಾಕ್ ಡೌನ್ ಸಡಿಲಿಕೆಯ ಈ ಅವಕಾಶವನ್ನು ಜಿಲ್ಲೆಯ ಜನತೆ ಎಚ್ಚರಿಕೆಯಿಂದ ಬಳಸಿಕೊಳ್ಳಬೇಕು .ದೇಶದ ಹಿತಕ್ಕಾಗಿ ಪ್ರಧಾನಮಂತ್ರಿಗಳು 41 ದಿನಗಳ ಲಾಕ್ ಡೌನ್ ಜಾರಿಗೊಳಿಸಿದ್ದಾರೆ, ಕೊರೊನಾ ನಯಂತ್ರಣ ಜೊತೆಗೆ ದೇಶದ ಭವಿಷ್ಯ, ಆರ್ಥಿಕ ಸಮತೋಲನ ಕಾಪಾಡಿಕೊಳ್ಳುವ ಹೊಣೆಗಾರಿಕೆಯೂ ಇರುವುದರಿಂದ ಕೇಂದ್ರ ಸರ್ಕಾರದ ಮಾರ್ಗದರ್ಶನದಂತೆ ಲಾಕ್‌ಡೌನ್ ನಂದ ಕೆಲವು ಆರ್ಥಿಕ ಚಟುವಟಿಕೆಗಳಿಗೆ ವಿನಾಯಿತಿ ನೀಡಲಾಗುತ್ತಿದೆ.ಈ ವಿನಾಯಿತಿಯನ್ನು ಜನತೆ ಮನಬಂದಂತೆ ಬಳಸಬಾರದು. ಸಾಮಾಜಿಕ ಅಂತರ ಕಾಪಾಡಿಕೊಳ್ಳುವುದು, ಅನಗತ್ಯ ತಿರುಗಾಟಕ್ಕೆ ಸ್ವಯಂ ನಬರ್ಂಧ ಹಾಕಿಕೊಳ್ಳಬೇಕು.

ಮಾಸ್ಕ್ ಧರಿಸದೇ ಇದ್ದರೆ, ಸಾರ್ವಜನಿಕ ಸ್ಥಳಗಳಲ್ಲಿ ಉಗುಳಿದರೆ ದಂಡ ವಿಧಿಸುವ ಕಾರ್ಯ ಚುರುಕುಗೊಳಿಸಬೇಕು. ಜನತೆ ಸಹಕರಿಸಿದರೆ ಕೊರೊನಾ ನಯಂತ್ರಣ ಸುಲಭ ಸಾಧ್ಯವಾಗುತ್ತದೆ ಎಂದರು. ದೇಶದಲ್ಲೆಡೆ ಇರುವಂತೆ ಇಲ್ಲಿಯೂ ಮಾಲ್, ಮಾರುಕಟ್ಟೆ ಸಂಕೀರ್ಣಗಳು, ಬಾರ್, ರೆಸ್ಟೋರೆಂಟ್, ಜಿಮ್, ಧಾರ್ಮಿಕ ಚಟುವಟಿಕೆಗಳು, ಸಭೆ, ಸಮಾರಂಭಗಳ ಮೇಲಿನ ನಬರ್ಂಧ ಮುಂದುವರೆಯಲಿದೆ.

ಸೀಲ್ ಡೌನ್ ಪ್ರದೇಶ ಹೊರತುಪಡಿಸಿ ಉಳಿದೆಡೆ ಎಲ್ಲಾ ಖಾಸಗಿ ಮತ್ತು ಸರ್ಕಾರಿ ಕಟ್ಟಡ ನರ್ಮಾಣ ಕಾಮಗಾರಿಗಳನ್ನೂ ಕೈಗೊಳ್ಳಲು ಅವಕಾಶ ಕಲ್ಪಿಸಲಾಗುವುದು. ಶೇ.25 ರಷ್ಟು ಕೈಗಾರಿಕಾ ಚಟುವಟಿಕೆಗಳು ಪುನರಾರಂಭವಾಗಿವೆ. ಸಂಜೆ 7 ಗಂಟೆ ನಂತರ ಬೆಳಗಿನ 7 ಗಂಟೆಯವರೆಗೆ ಲಾಕ್ ಡೌನ್ ನಬರ್ಂಧ ಜಾರಿಯಾಗುವುದರಿಂದ ಈ ಅವಧಿಯಲ್ಲಿ ಕೈಗಾರಿಕೆಗಳು ರಾತ್ರಿ ಪಾಳಿಯ ಕಾರ್ಮಿಕರ ವಿಶ್ರಾಂತಿಗೆ ತಮ್ಮ ಆವರಣದಲ್ಲಿಯೇ ಅವಕಾಶ ಕಲ್ಪಿಸಿ ಉತ್ಪಾದನೆ ಚಟುವಟಿಕೆಗಳನ್ನು ಮುಂದುವರೆಸಲು ಅವಕಾಶ ನೀಡಲಾಗುವುದು. ವಿವಿಧ ಬಡಾವಣೆಗಳಿಗೆ ತರಕಾರಿ ಪೂರೈಕೆ ಮುಂದುವರೆಯಲಿ ಇದರಿಂದ ಜನಸಂದಣಿ ನಯಂತ್ರಣವಾಗುತ್ತದೆ ಎಂದರು.ಖಾಸಗಿ ಆಸ್ಪತ್ರೆಗಳು ಸಮರ್ಪಕವಾಗಿ ಸೇವೆ ನೀಡದಿರುವ ಬಗ್ಗೆ ಸಾರ್ವಜನಕರಿಂದ ದೂರುಗಳು ಬರುತ್ತಿವೆ. ಎಸ್ ಡಿ ಎಂ ಸೇವೆ ಪ್ರಾರಂಭಿಸಿದೆ. ಈ ಕುರಿತು ಶ್ರೀಕ್ಷೇತ್ರ ಧರ್ಮಸ್ಥಳದ ಧರ್ಮಾಧಿಕಾರಿಗಳಾದ ವಿರೇಂದ್ರ ಹೆಗಡೆಯವರೊಂದಿಗೆ ಮಾತನಾಡಿದಾಗ ಅವರು ಸರ್ಕಾರದೊಂದಿಗೆ ಎಲ್ಲಾ ಸಹಕಾರ ನೀಡಲು ಎಸ್ ಡಿ ಎಂ ಆಸ್ಪತ್ರೆಗೆ ನರ್ದೇಶನ ನೀಡಿದ್ದಾರೆ ಎಂದರು.

ಜಿಲ್ಲಾಧಿಕಾರಿ ದೀಪಾ ಚೋಳನ್ ಮಾತನಾಡಿ, ಹೊರರಾಜ್ಯಗಳಿಂದ ಬರುವ ಜನರಿಗೆ ಈಗ ಅವಕಾಶ ದೊರೆತಿದೆ ಎಲ್ಲರನ್ನೂ ಕೃಷಿ ವಿ.ವಿ.ಆವರಣದಲ್ಲಿ ತಪಾಸಣೆ ಮಾಡಲು ಸಿದ್ಧತೆ ಮಾಡಿಕೊಳ್ಳಲಾಗಿದೆ. ಅತಿಹೆಚ್ಚು ಪ್ರಕರಣಗಳನ್ನು ಹೊಂದಿರುವ ಮಹಾರಾಷ್ಟ್ರ, ಗುಜರಾತ್, ರಾಜಸ್ಥಾನ್, ತಮಿಳುನಾಡು ಹಾಗೂ ದೆಹಲಿ ರಾಜ್ಯಗಳಿಂದ ಬರುವ ಎಲ್ಲರನ್ನೂ ಸರ್ಕಾರಿ ಕ್ವಾರಂಟೈನ್ ಗೆ ಒಳಪಡಿಸಲಾಗುವುದು ಎಂದರು. ಕಿಮ್ಸ್ ನರ್ದೇಶಕ ಡಾ.ರಾಮಲಿಂಗಪ್ಪ ಅಂಟರತಾಣಿ ಮಾತನಾಡಿ, ಸದ್ಯ ಕಿಮ್ಸ್ ಹೊರರೋಗಿ ವಿಭಾಗದಲ್ಲಿ 800, ಒಳರೋಗಿ 500 ಜನ ಚಿಕಿತ್ಸೆ ಪಡೆಯುತ್ತಿದ್ದಾರೆ, ತುರ್ತು ಚಿಕಿತ್ಸಾ ಘಟಕದಲ್ಲಿಯೂ ರೋಗಿಗಳಿದ್ದಾರೆ. ಕೋವಿಡ್ ಪ್ರಯೋಗಾಲಯದಲ್ಲಿ ಪ್ರತಿನತ್ಯ ಸುಮಾರು 250 ಕ್ಕೂ ಹೆಚ್ಚು ವರದಿಗಳು ಸಿದ್ಧವಾಗುತ್ತಿವೆ. ರಾಜ್ಯದಲ್ಲಿಯೇ ಮೊದಲ ಬಾರಿಗೆ ಪ್ರಾಯೋಗಿಕ ಪ್ಲಾಸ್ಮಾ ಥೆರಪಿ ಕೈಗೊಳ್ಳಲು ಐಸಿಎಂ ಆರ್ ನಂದ ಕಿಮ್ಸ್ ಗೆ ಅನುಮೋದನೆ ದೊರೆತಿದೆ ಎಂದರು.

ಶಾಸಕರಾದ ಶಂಕರ ಪಾಟೀಲ ಮುನೇನಕೊಪ್ಪ, ಅಮೃತ ದೇಸಾಯಿ, ಕುಸುಮಾವತಿ ಶಿವಳ್ಳಿ, ವಿಧಾನಪರಿಷತ್ ಸದಸ್ಯರಾದ ಎಸ್.ವಿ.ಸಂಕನೂರ, ಪ್ರದೀಪ ಶೆಟ್ಟರ್, ಶ್ರೀನವಾಸ ಮಾನೆ, ಮಹಾನಗರ ಪೊಲೀಸ್ ಆಯುಕ್ತ ಆರ್.ದಿಲೀಪ್, ಜಿಲ್ಲಾ ಪೊಲೀಸ್ ವರಿ?ಠಧಿಕಾರಿ ವರ್ತಿಕಾ ಕಟಿಯಾರ್, ಜಿಪಂ ಸಿಇಓ ಡಾ.ಬಿ.ಸಿ.ಸತೀಶ, ಮಹಾನಗರಪಾಲಿಕೆ ಆಯುಕ್ತ ಡಾ.ಸುರೇಶ ಇಟ್ನಾಳ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಯಶವಂತ ಮದೀನಕರ್, ಕಿಮ್ಸ್ ನ ಡಾ.ಲಕ್ಷ್ಮೀಕಾಂತ, ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನರ್ದೇಶಕ ಮೋಹನ ಭರಮಕ್ಕನವರ ಮತ್ತಿತರರು ಇದ್ದರು.

# ನಿಷೇಧಿತ ವಲಯದ ನಿವಾಸಿಗಳಿಗೆ ಸರ್ಕಾರದಿಂದ ಉಚಿತ ಪಡಿತರ, ಹಾಲು, ತರಕಾರಿ: ಗೃಹ ಸಚಿವ ಬಸವರಾಜ ಬೊಮ್ಮಾಯಿ

(1ನೇ ಪುಟದಿಂದ)

ನಿಯಮ ಹಾಗೂ ಬಫರ್ ಜೋನ್ ನಿಯಮಗಳನ್ನು ಪಾಲಿಸಿ ಸಹಕರಿಸುವಂತೆ ತಿಳಿಸಿದರು.

ಸ್ವಚ್ಛತೆಗೆ ಸೂಚನೆ: ಇದೇ ಸಂದರ್ಭದಲ್ಲಿ ಸವಣೂರು ತಹಶೀಲ್ದಾರ ಹಾಗೂ ಪುರಸಭೆ ಮುಖ್ಯಾಧಿಕಾರಿಗಳಿಗೆ ಸೀಲ್‌ಡೌನ್ ಪ್ರದೇಶದಲ್ಲಿ ಸ್ವಚ್ಛತೆಗೆ ಹೆಚ್ಚಿನ ಆದ್ಯತೆ ನೀಡಲು ಸೂಚಿಸಿದರು. ಕ್ರಿಮಿನಾಶಕ ಸಿಂಪರಣೆ, ಶುದ್ಧ ನೀರಿನ ಪೂರೈಕೆ ಕುರಿತಂತೆ ಆದ್ಯತೆ ಮೇರೆಗೆ ಕ್ರಮಕೈಗೊಳ್ಳುವಂತೆ ಸೂಚನೆ ನೀಡಿದರು.

ಸೀಲ್‌ಡೌನ್ ಏರಿಯಾದ ವಸತಿ ನಿಲಯದಲ್ಲಿ ಆರಂಭದಲ್ಲಿ ಫಿವರ್ ಕ್ಲಿನಿಕ್‌ನಲ್ಲಿ ವೈದ್ಯಕೀಯ ಸೌಲಭ್ಯಗಳನ್ನು ಹೆಚ್ಚಳಮಾಡಬೇಕು. ಮಾಸ್ಕ್, ಸ್ಯಾನಟೈಸರ್ ಹಾಗೂ ಸಿಬ್ಬಂದಿಗಳನ್ನು ಹೆಚ್ಚುವರಿಯಾಗಿ ನಿಯೋಜಿಸಿ ದಿನದ 24 ತಾಸು ಕಾರ್ಯನರ್ವಹಿಸುವಂತೆ ಕ್ರಮವಹಿಸಲು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳಿಗೆ ಸೂಚನೆ ನೀಡಿದರು.

ಸೀಲ್‌ಡೌನ್ ಏರಿಯಾದಲ್ಲಿ 100 ಮೀಟರ್ ಅಂತರದಲ್ಲಿ ಮೊದಲ ರ್ಯಾಂಡಮ್ ತಪಾಸಣೆ ಹಾಗೂ ಎರಡನೇ ಹಂತದಲ್ಲಿ 200 ಮೀಟರ್‌ನಲ್ಲಿ ರ್ಯಾಂಡಮ್ ಸ್ಯಾಂಪಲ್‌ಗಳನ್ನು ತಪಾಸಣೆಯನ್ನು ಕೈಗೊಳ್ಳಬೇಕು. ಆರೋಗ್ಯ ತಪಾಸಣೆ ಕೈಗೊಳ್ಳಬೇಕು. ಸೀಲ್‌ಡೌನ್ ಏರಿಯಾದಲ್ಲಿ ತೀವ್ರ ನಿಗಾವಹಿಸಿ ತಪಾಸಣೆ, ಮಾದರಿ ಸಂಗ್ರಹ, ಆರೋಗ್ಯದ ಮೇಲೆ ನಿಗಾ ವಹಿಸುವ ಕಾರ್ಯಕ್ರಮವನ್ನು ಕೈಗೊಳ್ಳುವಂತೆ ತಾಲೂಕಾ ಆರೋಗ್ಯಾಧಿಕಾರಿಗಳ ತಂಡಕ್ಕೆ ಸೂಚನೆ ನೀಡಿದರು.

ಗರ್ಭಿಣಿಯರು ಸೇರಿದಂತೆ ತೀವ್ರ ಆರೋಗ್ಯ ಸಮಸ್ಯೆ ಇರುವ ಜನರನ್ನು ತಾಲೂಕಾ ಐಸೋಲೇಷನ್ ಕೇಂದ್ರದಲ್ಲಿ ಪ್ರತ್ಯೇಕವಾಗಿರಿಸಿ ಚಿಕಿತ್ಸೆ ನೀಡಬೇಕು. ಎಲ್ಲ ಸ್ವಾಬ್‌ಗಳನ್ನು ಪ್ರಯೋಗಾಲಯಕ್ಕೆ ಕಳುಹಿಸಿಕೊಡಬೇಕು ಎಂದು ಸೂಚನೆ ನೀಡಿದರು.

ತಾಲೂಕಾ ಆಸ್ಪತ್ರೆಗೆ ಭೇಟಿ ನೀಡಿ ಐಸೋಲೇಷನ್ ವಾರ್ಡ್‌ಗಳ ವೀಕ್ಷಣೆಮಾಡಿದರು. ಕೋವಿಡ್ ಚಿಕಿತ್ಸಾ ಸೇವೆಗೆ ತೊಡಗಿಕೊಂಡಿರುವ ವೈದ್ಯಕೀಯ ಸಿಬ್ಬಂದಿಗಳಿಗೆ ಅಭಿನಂದಿಸಿದರು.

ಶಿಸ್ತು ಉಲ್ಲಂಘನೆಗೆ ಅವಕಾಶ ಇಲ್ಲ: ಸೀಲ್‌ಡೌನ್ ಏರಿಯಾವನ್ನು ವೀಕ್ಷಣೆಮಾಡಿ ಮಾಧ್ಯಮದವರೊಂದಿಗೆ ಮಾತನಾಡಿದ ಗೃಹ ಸಚಿವ ಬಸವರಾಜ ಬೊಮ್ಮಾಯಿ ಅವರು ಮಾತನಾಡಿ, ಮುಂಬೈನಿಂದ ಸವಣೂರಿನ ಎಸ್.ಎಂ.ಕೃಷ್ಣ ಬಡಾವಣೆಯ ಇಬ್ಬರಲ್ಲಿ ಪಾಸಿಟಿವ್ ಪ್ರಕರಣ ಪತ್ತೆಯಾದ ಹಿನ್ನೆಲೆಯಲ್ಲಿ ಸೀಲ್‌ಡೌನ್ ಮಾಡಲಾಗಿದೆ. ಇವನ ಸಂಪರ್ಕಿತರ ಗಂಟಲು ದ್ರವ್ಯ ಮಾದರಿ ತಪಾಸಣೆ ವರದಿ ಬಂದಿದ್ದು, ಎಲ್ಲರ ವರದಿಗಳು ನೆಗಟಿವ್ ಬಂದಿವೆ. ಸೋಂಕಿತನ ಸಂಚಾರ ಮಾಹಿತಿ ಪಡೆಯಲಾಗಿದೆ. ಸವಣೂರಿಗೆ ಬರುವ ಮಾರ್ಗದಲ್ಲಿ ಹುಬ್ಬಳ್ಳಿ ಎ.ಪಿ.ಎಂ.ಸಿ.ಗೆ ತೆರಳಿರುವ ಕಾರಣ ಈ ಕುರಿತಂತೆ ಧಾರವಾಡ ಜಿಲ್ಲಾಡಳಿತಕ್ಕೆ ಮಾಹಿತಿ ನೀಡಲಾಗಿದೆ. ಈಗಾಗಲೇ ಸಂಬಂಧ 20 ಜನರನ್ನು ಧಾರವಾಡ ಜಿಲ್ಲಾಡಳಿತ ಕ್ವಾರಂಟೈನ್‌ಗೆ ಒಳಪಡಿಸಿದೆ ಎಂದು ತಿಳಿಸಿದರು.

ಸೀಲ್‌ಡೌನ್ ಏರಿಯಾದಲ್ಲಿ 394 ಕುಟುಂಬಗಳಿಗೆ ಉಚಿತವಾಗಿ ಆಹಾರ್ ಕಿಟ್, ಹಾಲು , ವೈದ್ಯಕೀಯ ಸೌಲಭ್ಯಗಳನ್ನು ನೀಡಲಾಗಿದೆ. ಸ್ಥಳೀಯ ನವಾಸಿಗಳ ಬೇಡಿಕೆಯಂತೆ ಉಚಿತವಾಗಿ ಸರ್ಕಾರದಿಂದಲೇ ತರಕಾರಿ ಪೂರೈಸಲಾಗುವುದು. ಸಂಘ-ಸಂಸ್ಥೆಗಳ ನೆರವಿನಿಂದ ಹಣ್ಣು ಸಹ ಪೂರೈಸಲು ಅಧಿಕಾರಿಗಳಿಗೆ ಸೂಚನೆ ನೀಡಿದ್ದೇನೆ ಎಂದು ತಿಳಿಸಿದರು.

ಈಗಾಗಲೇ ಸೀಲ್‌ಡೌನ್ ಪ್ರದೇಶದಲ್ಲಿ ಆರೋಗ್ಯ ತಪಾಸಣೆ ನಡೆಯುತ್ತಿದೆ. ಸೋಂಕಿತರ ಮನೆಯ 100 ಮೀಟರ್ ವ್ಯಾಪ್ತಿಯಲ್ಲಿ ರ್ಯಾಂಡಮ್ ಆಗಿ ಗಂಟಲು ಮಾದರಿ ದ್ರವ್ಯ ಸಂಗ್ರಹಿಸಲಾಗುತ್ತಿದೆ ಹಾಗೂ ಎರಡನೇ ಹಂತದಲ್ಲಿ 200 ಮೀಟರ್ ವ್ಯಾಪ್ತಿಯಲ್ಲಿ ರ್ಯಾಂಡಮ್ ಆಗಿ ಮತ್ತೊಮ್ಮೆ ಗಂಟಲು ಮಾದರಿಗಳನ್ನು ಸಂಗ್ರಹಿಸಿ ಲ್ಯಾಬ್ ವರದಿಗೆ ಕಳುಹಿಸಲಾಗುತ್ತದೆ. ರೋಗ ಲಕ್ಷಣ ಇರುವವರನ್ನು ಗುರುತಿಸುವ ಕಾರ್ಯ ಸಹ ವೈದ್ಯಧಿಕಾರಿಗಳಿಂದ ಕೈಗೊಳ್ಳಲಾಗುತ್ತಿದೆ. ಎಲ್ಲ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ ಎಂದು ತಿಳಿಸಿದರು. ಎಸ್.ಎಂ.ಕೃಷ್ಣ ಬಡಾವಣೆಯನ್ನು ಈಗಾಗಲೇ ಸೀಲ್‌ಡೌನ್ ಮಾಡಲಾಗಿದೆ. ಸವಣೂರ ಪಟ್ಟಣ ಭಾಗವನ್ನು ಬಫರ್ ಜೋನ್ ಎಂದು ಘೋಷಿಸಿ ಕಠಿಣವಾದ ನಿಯಮಗಳನ್ನು ಜಾರಿಗೊಳಿಸಲಾಗುತ್ತಿದೆ. ಇಲ್ಲಿಯ ಜನತೆ ಈವರೆಗೆ ನೀಡಿದ ಸಹಕಾರಕ್ಕಿಂತ ಹೆಚ್ಚಿನ ಸಹಕಾರವನ್ನು ನೀಡಬೇಕಾಗಿದೆ. ಶಿಸ್ತು ಉಲ್ಲಂಘನೆಗೆ ಅವಕಾಶ ನೀಡುವುದಿಲ್ಲ. ಕೋವಿಡ್ ಬೇಗ ನಿಯಂತ್ರಣಕ್ಕೆ ಬರಲು ಎಲ್ಲರ ಸಹಕಾರ ಹಾಗೂ ನಿಯಮಗಳ ಪಾಲನೆ ಅತ್ಯವಶ್ಯವಾಗಿದೆ. ನಿಯಮಗಳ ಉಲ್ಲಂಘನೆ ಮಾಡಿದವರ ಮೇಲೆ ಕಠಿಣ ಕಾನೂನು ಕ್ರಮಕೈಗೊಳ್ಳಲಾಗುವುದು. ಜನರ ಆರೋಗ್ಯದ ಹಿತದೃಷ್ಟಿಯಿಂದ ಯಾವುದೇ ರಾಜೀಮಾಡಿಕೊಳ್ಳುವುದಿಲ್ಲ ಎಂದು ಸ್ಪಷ್ಟಪಡಿಸಿದರು.ಜಿಲ್ಲಾಧಿಕಾರಿ ಕೃಷ್ಣ ಬಾಜಪೇಯಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕೆ.ಜಿ.ದೇವರಾಜ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನರ್ವಾಹಣಾಧಿಕಾರಿ ರಮೇಶ ದೇಸಾಯಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ರಾಜೇಂದ್ರ ದೊಡ್ಮನಿ, ಜಿಲ್ಲಾ ಶಸ್ತ್ರ ಚಿಕಿತ್ಸಕ ಡಾ.ನಾಗರಾಜ ನಾಯಕ, ಉಪವಿಭಾಗಾಧಿಕಾರಿಗಳಾದ ಶ್ರೀಮತಿ ಅನ್ನಪೂರ್ಣ ಮುದಕಮ್ಮನವರ, ಡಾ.ದಿಲೀಷ್ ಶಶಿ, ತಹಶೀಲ್ದಾರ ಮಲ್ಲಿಕಾರ್ಜುನ ಇತರ ಅಧಿಕಾರಿಗಳು ಉಪಸ್ಥಿತರಿದ್ದರು.

# ಕರೋನಾ ವಾರಿಯರ್ ಎಂದು ಗೌರವಿಸಿ ಸನ್ಮಾನ

ಬಳ್ಳಾರಿ ಮೇ 09: ನಗರದ ಮಹಾನಗರ ಪಾಲಿಕೆಯ ಆಯುಕ್ತೆ ಅವರನ್ನು ಟಿ.ಹೆಚ್.ಎಂ.ಬಸವರಾಜ, ಅಧ್ಯಕ್ಷರು ಕರ್ನಾಟಕ ಜಾನಪದ ಪರಿಷತ್ತು, ಬಳ್ಳಾರಿ ಜಿಲ್ಲಾ ಘಟಕ ಇವರು ಕರೋನಾ ಸಾಂಕ್ರಾಮಿಕ ರೋಗ (ಕೋವಿಡ್-19) ಹರಡುವಿಕೆಯನ್ನು ತಡೆಗಟ್ಟುವಲ್ಲಿ ಬಳ್ಳಾರಿ ಮಹಾನಗರ ಪಾಲಿಕೆಯ ಆಯುಕ್ತರಾದ ಶ್ರೀಮತಿ ಎಂ.ವಿ.ತುಷಾರಮಣಿ ಇವರು ಸಲ್ಲಿಸಿದ ಅಮೋಘ ಸೇವೆಗಾಗಿ ಅವರನ್ನು "ಕರೋನಾ ವಾರಿಯರ್" ಎಂದು ಗೌರವಿಸಿ ಸನ್ಮಾನಿಸಿದರು.



# ಅನ್ಯ ರಾಜ್ಯಗಳ ವಲಸಿಗರ ಪ್ರವೇಶಕ್ಕೆ ಜೋಳದರಾಶಿ ಚೆಕ್ ಪೋಸ್ಟ್ ಅನ್ಯರಾಜ್ಯಗಳಿಂದ ಆಗಮಿಸಿದ ವಲಸಿಗರಿಗೆ ತಪಾಸಣೆ; ಕ್ವಾರಂಟೈನ್‌ಗೆ ರವಾನೆ

ಬಳ್ಳಾರಿ,ಮೇ09: ಲಾಕ್ ಡೌನ್‌ನಲ್ಲಿ ಅಂತರ್ ರಾಜ್ಯಗಳಿಂದ ರಾಜ್ಯದ ವಿವಿಧ ಜಿಲ್ಲೆಗಳಿಗೆ ಆಗಮಿಸುವ ವಲಸೆ ಕಾರ್ಮಿಕರು, ಯಾತ್ರಿಕರು,ವಿದ್ಯಾರ್ಥಿಗಳು ಹಾಗೂ ಇತರೇ ಸಾರ್ವಜನಿಕರಿಗೆ ಬಳ್ಳಾರಿ ಜಿಲ್ಲೆಯ ಮೂಲಕ ಪ್ರವೇಶಿಸುವುದಕ್ಕೆ ತಾಲೂಕಿನ ಜೋಳದರಾಶಿ ಬಳಿ



ಚೆಕ್‌ಪೋಸ್ಟ್‌ನ್ನು ಜಿಲ್ಲಾಡಳಿತ ಎರಡು ದಿನಗಳಿಂದ ಆರಂಭಿಸಿದ್ದು,ಅನ್ಯರಾಜ್ಯಗಳಿಂದ ಆಗಮಿಸುವ ವಲಸಿಗರಿಗೆ ತಪಾಸಣೆ ನಡೆಸಿ ಅವರ ಸಂಬಂಧಿಸಿದ ಜಿಲ್ಲೆಗಳಿಗೆ ಕಳುಹಿಸಿಕೊಡಲಾಗುತ್ತಿದೆ ಮತ್ತು ಜಿಲ್ಲೆಯವರಾಗಿದ್ದರೇ ಅವರನ್ನು ಕ್ವಾರಂಟೈನ್‌ಗೆ ಕಳುಹಿಸಿಕೊಡಲಾಗುತ್ತಿದೆ.ಅನ್ಯರಾಜ್ಯಗಳಿಂದ ವಾಹನಗಳು ನುಸುಳದಂತೆ ತೀವ್ರ ಕಟ್ಟೆಚ್ಚರ ವಹಿಸಲಾಗಿದ್ದು,ಪ್ರತಿಯೊಂದು ವಾಹನವನ್ನು ತೀವ್ರ ತಪಾಸಣೆ ನಡೆಸಲಾಗುತ್ತಿದೆ.

ಚೆಕ್‌ಪೋಸ್ಟ್ ಮೂಲಕ ಆಗಮಿಸುವ ಪ್ರತಿ ವಾಹನವನ್ನು ತಡೆದು ಪಾಸ್ ಪಡೆದುಕೊಂಡಿದ್ದಾರೇಯೇ ಎಂದು ಪರಿಶೀಲಿಸಲಾಗುತ್ತಿದೆ. ಪಾಸ್ ಪಡೆದವರನ್ನು ಪಕ್ಕದಲ್ಲಿಯೇ ಸ್ಥಾಪಿಸಲಾಗಿರುವ ಚೆಳಗುರ್ಕಿ ಮೊರಾರ್ಜಿ ದೇಸಾಯಿ ವಸತಿ ಶಾಲೆಯಲ್ಲಿನ ತಪಾಸಣೆ ಕೇಂದ್ರಕ್ಕೆ ಕರೆದುಕೊಂಡು ಹೋಗಿ ಜ್ವರ ತಪಾಸಣೆ ಮಾಡಿಸಿ ಅವರಿಗೆ ಕೈಗೆ ಕ್ವಾರಂಟೈನ್ ಸೀಲ್ ಹಾಕಲಾಗುತ್ತಿದೆ. ತಪಾಸಣೆ ಮಾಡಿಸಿದ ನಂತರ ಅವರು ಬಳ್ಳಾರಿ ಜಿಲ್ಲೆಯವರಾಗಿದ್ದು,ಜಿಲ್ಲೆಯೊಳಗೆ ತೆರಳಬೇಕಿದ್ದಲ್ಲಿ ಜಿಲ್ಲಾಡಳಿತ ಸ್ಥಾಪಿಸಲಾಗಿರುವ ಕ್ವಾರಂಟೈನ್‌ಗೆ ಅವರನ್ನು ಕಳುಹಿಸಿಕೊಡಲಾಗುತ್ತಿದೆ.ಅನ್ಯ ಜಿಲ್ಲೆಗಳಿಗೆ ತೆರಳಬೇಕಾದವರಿದ್ದಲ್ಲಿ ಸಂಬಂಧಿಸಿದ ಜಿಲ್ಲಾ ನೋಡಲ್ ಅಧಿಕಾರಿಗಳ ಎಸ್ಕಾರ್ಟ್ ವಾಹನದ ಮೂಲಕ ವಲಸಿಗರ ವಾಹನವನ್ನು ಕರೆದುಕೊಂಡು ಸಂಬಂಧಿಸಿದ ಜಿಲ್ಲೆಯ ಗಡಿಯ ಚೆಕ್‌ಪೋಸ್ಟ್ ಬಳಿ ಬಿಟ್ಟು ಬರಲಾಗುತ್ತಿದೆ.ಕಳೆದ 24 ಗಂಟೆಗಳಿಂದ ಗುಂಟೂರು,ಚಿತ್ತೂರು,ಅನಂತಪುರ ಜಿಲ್ಲೆಗಳಿಂದ 130 ಜನರು ಈ ಚೆಕ್‌ಪೋಸ್ಟ್ ಮೂಲಕ ಆಗಮಿಸಿದ್ದು, ಅವರನ್ನು ತಪಾಸಣೆ ಮಾಡಿ ಕ್ವಾರಂಟೈನ್‌ಗೆ ಕಳುಹಿಸಲಾಗಿದೆ.ಸ್ಕ್ರೀನಿಂಗ್ ಸೆಂಟರ್‌ನಲ್ಲಿ ಒಟ್ಟು 50 ಜನ ಸಿಬ್ಬಂದಿ ಮೂರು ಪಾಳಿಯಂತೆ ಕಾರ್ಯನಿರ್ವಹಿಸುತ್ತಿದ್ದು, ಆರೋಗ್ಯ ಇಲಾಖೆ ಸಿಬ್ಬಂದಿ ಆಗಮಿಸುವ ವಲಸಿಗರನ್ನು ತಪಾಸಣೆ ಮಾಡುತ್ತಿದ್ದು,ಉಳಿದ ಇಲಾಖೆಗಳ ಸಿಬ್ಬಂದಿ ವಲಸಿಗರು ಯಾವ ಜಿಲ್ಲೆಯವರು;ಎಲ್ಲಿಗೆ ತಲುಪಬೇಕು ಎಂಬುದನ್ನು ನಮೂದಿಸಿಕೊಂಡು ಅಲ್ಲಿಗೆ ಕಳುಹಿಸಿಕೊಡುವ ಕೆಲಸ ಮಾಡುತ್ತಿದ್ದಾರೆ ಎಂದು ಸ್ಥಳದಲ್ಲಿದ್ದ ತಪಾಸಣೆ ಕೇಂದ್ರದ ನೋಡಲ್ ಅಧಿಕಾರಿ ಈರಪ್ಪ ತಿಳಿಸಿದರು.

# ನಿತ್ಯೋತ್ಸವ ಕವಿಗೆ ನುಡಿನಮನ- ಕಸಾಪ ಸಂಸ್ಥಾಪನಾ ದಿನಾಚರಣೆ ಕೆ.ಎಸ್.ನಿಸಾರ್ ಅಹ್ಮದ್ ಅವರ ಸಾಹಿತ್ಯ ಕೊಡುಗೆ ಅನನ್ಯ - ಸಿದ್ದಲಿಂಗೇಶ್ ರಂಗಣ್ಣನವರ್

ಬಳ್ಳಾರಿ ಮೇ.9, ಭೂಗರ್ಭಶಾಸ್ತ್ರದ ಪ್ರಾಧ್ಯಾಪಕರಾಗಿದ್ದ ಪ್ರೊ.ಕೆ.ಎಸ್.ನಿಸಾರ್ ಅಹ್ಮದ್ ಅವರು ಕನ್ನಡ ಸಾಹಿತ್ಯಕ್ಕೆ ನೀಡಿದ ಕೊಡುಗೆ ಅನನ್ಯವಾಗಿದೆ ಎಂದು ಬಳ್ಳಾರಿಯ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಸಿದ್ದಲಿಂಗೇಶ್ ರಂಗಣ್ಣನವರ್ ಅವರು



ತಿಳಿಸಿದರು. ಅವರು ಸ್ಥಳೀಯ ಕನ್ನಡ ಭವನದಲ್ಲಿ ಕನ್ನಡ ಸಾಹಿತ್ಯ ಪರಿಷತ್ತು ಜಿಲ್ಲಾ ಘಟಕವು ಹಮ್ಮಿಕೊಂಡಿದ್ದ ನಿತ್ಯೋತ್ಸವದ ಕವಿ ಕೆ.ಎಸ್.ನಿಸಾರ್ ಆಹ್ಮದ್ ಅವರಿಗೆ ನುಡಿನಮನ ಹಾಗೂ ಕಸಾಪ ಸಂಸ್ಥಾಪನಾ ದಿನದ ಸ್ಮರಣಾರ್ಥ ತಾಯಿ ಭುವನೇಶ್ವರಿ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ ಮಾತನಾಡುತ್ತಿದ್ದರು. ಅವರ 'ಜೋಗದ ಸಿರಿ ಬೆಳಕಿನಲ್ಲಿ' ಗೀತೆಯು ಕನ್ನಡಿಗರ ಅಸ್ಮಿತೆಯ ಕಾವ್ಯವಾಗಿದೆ. ಅವರು 23 ಕಾವ್ಯ ಕೃತಿಗಳನ್ನು, ಗದ್ಯ ಮತ್ತು ಅನುವಾದಿತ ಕೃತಿಗಳನ್ನು ರಚಿಸುವ ಮೂಲಕ ಕನ್ನಡಿಗರ ಹೃದಯದಲ್ಲಿ ನೆಲೆಸಿದ್ದಾರೆ. ಸುಗಮ ಸಂಗೀತ ಕ್ಷೇತ್ರಕ್ಕೆ ತಮ್ಮದೇ ಆದ ಕೊಡುಗೆ ನೀಡಿದ ನಿಸಾರ್ ಅಹ್ಮದ್ ಅವರು ಜನಪ್ರಿಯ ಭಾವಗೀತೆಗಳನ್ನು ರಚಿಸಿದ್ದಾರೆ. ಅವರ 'ಕುರಿಗಳು ಸಾರ್ ಕುರಿಗಳು', ಮತ್ತದೇ ಸಂಜೆ, ಅದೇ ಮೌನ ಅದೇ ಏಕಾಂತ ಎಂಬ ಇನ್ನಿತರ ಗೀತೆಗಳು ಕನ್ನಡಿಗರನ್ನು ಸದಾ ಕಾಲ ಕಾಡುತ್ತಿರುತ್ತವೆ ಎಂದು ಹೇಳಿದರು. ಕನ್ನಡ ಸಾಹಿತ್ಯ ಪರಿಷತ್ತಿನ ಜಿಲ್ಲಾಧ್ಯಕ್ಷ ಸಿದ್ದರಾಮ ಕಲ್ಮಠ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿ, ಕೆ.ಎಸ್.ನಿಸಾರ್ ಅಹ್ಮದ್ ಅವರ ಸಂಜೆ ಐದರ ಮಳೆ, ನಿತ್ಯೋತ್ಸವ, ನೆನೆದವರ ಮನದಲ್ಲಿ, ನಾನೆಂಬ ಪರಕೀಯ, ಅನಾಮಿಕ, ಆಕಾಶಕ್ಕೆ ಸರಹದ್ದುಗಳಿಲ್ಲ. ಇವರ ಕೃತಿಗಳು ಮಹತ್ವಪೂರ್ಣವಾದವುಗಳು. ಸುಗಮ ಸಂಗೀತ ಕ್ಷೇತ್ರದಲ್ಲಿ ಅವರ ಕವಿತೆಗಳು ಅಪಾರ ಹೆಸರು ಮಾಡಿದವು. ಮಾಸ್ತಿ ಪ್ರಶಸ್ತಿ, ಗೊರೂರು ಪ್ರಶಸ್ತಿ, ರಾಜ್ಯೋತ್ಸವ ಪ್ರಶಸ್ತಿ, ಕೇಂದ್ರ ಸಾಹಿತ್ಯ ಅಕಾಡೆಮಿ ಪ್ರಶಸ್ತಿ, ಪದ್ಮಶ್ರೀ ಪ್ರಶಸ್ತಿ, ಅನಕೃ ಪ್ರಶಸ್ತಿ, ಪಂಪ ಪ್ರಶಸ್ತಿ, ನಾಡೋಜ ಪ್ರಶಸ್ತಿ, 2006 ರಲ್ಲಿ ಶಿವಮೊಗ್ಗದಲ್ಲಿ ನಡೆದ 73 ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ ಅಧ್ಯಕ್ಷತೆಯನ್ನು ವಹಿಸಿದ್ದರು ಎಂದು ತಿಳಿಸಿದರು. ಅವರ ನಿಧನಕ್ಕೆ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ತೀವ್ರ ಕಂಬನಿ ಮಿಡಿಯುತ್ತದೆ. ಕನ್ನಡದ ಶ್ರೇಷ್ಠ ಸಾಹಿತಿಯೊಬ್ಬರನ್ನು ಕಳೆದುಕೊಂಡು ಕನ್ನಡ ಸಾಹಿತ್ಯ ಲೋಕ ಬರಡಾಗಿದೆ. ನಿತ್ಯೋತ್ಸವದ ಹೊಸ ಪರಿಭಾಷೆಯ ಕವಿತೆಗಳನ್ನು ಕಟ್ಟಿದ ಕನ್ನಡದ ಧೀಮಂತ ಕವಿಯ ಅಗಲಿಕೆಗೆ ಕ.ಸಾ.ಪ.ಬಳ್ಳಾರಿ ಜಿಲ್ಲಾಘಟಕವು ಶ್ರದ್ಧಾಂಜಲಿ ಸಲ್ಲಿಸುತ್ತೇವೆ ಎಂದರು.

ಕಸಾಪ ಸಂಸ್ಥಾಪನಾ ದಿನಾಚರಣೆ: ಕನ್ನಡ ಸಾಹಿತ್ಯ ಪರಿಷತ್ತು ಸಮಸ್ತ ಕನ್ನಡಿಗರ ಪ್ರಾತಿನಿಧಿಕ ಸಂಸ್ಥೆ. ಅಂದಿನ ಮೈಸೂರು ಅರಸರಾದ ರಾಜರ್ಷಿ ನಾಲ್ವಡಿ ಕೃಷ್ಣರಾಜ ಒಡೆಯರ್ ಅವರ ಕನ್ನಡದ ಮೇಲಿನ ಬದ್ಧತೆ ಹಾಗೂ ಸರ್ ಎಂ.ವಿಶ್ವೇಶ್ವರಯ್ಯ ನವರ ದೂರದೃಷ್ಟಿಯಿಂದ ಸ್ಥಾಪನೆಗೊಂಡ ಕನ್ನಡ ಸಾಹಿತ್ಯ ಪರಿಷತ್ತಿನ ಬೆಳವಣಿಗೆಗೆ ಶ್ರಮಿಸಿದ ಎಲ್ಲಾ ಪೂರ್ವಿಕರ ಪರಂಪರೆಯನ್ನು ಗೌರವದಿಂದ ಸ್ಮರಿಸೋಣ ಎಂದು ಕಸಾಪ ಜಿಲ್ಲಾಧ್ಯಕ್ಷ ಸಿದ್ದರಾಮ ಕಲ್ಮಠ ಅವರು ನುಡಿದರು. ಕ.ಸಾ.ಪ.ಎಂಬುದು ಕನ್ನಡಿಗರ ಪಾಲಿನ ಮೂರಕ್ಷರದ ಗಾಯತ್ರಿ ಮಂತ್ರ ಇಂತಹ ಸಂಸ್ಥೆಯ ಬಳ್ಳಾರಿ ಜಿಲ್ಲಾ ಕ.ಸಾ.ಪ.ದ ಅಧ್ಯಕ್ಷತೆವಹಿಸಿ ಕಾರ್ಯನಿರ್ವಹಿಸಲು ಆಶೀರ್ವದಿಸಿದ ಕ.ಸಾ.ಪ.ದ ಆಜೀವ ಸದಸ್ಯರು, ಸಾಹಿತಿಗಳು,ಕನ್ನಡಾಭಿಮಾನಿಗಳು ಹಾಗೂ ಬೆಲೆ ಕಟ್ಟಲಾಗದ ಕನ್ನಡ ಕಾಯಕದಲ್ಲಿ ನಿರತರಾಗಿರುವ ಎಲ್ಲಾ ಕ.ಸಾ.ಪ .ಪದಾಧಿಕಾರಿಗಳನ್ನು ಅಭಿನಂದಿಸಿದರು. ಸರಳಾದೇವಿ ಕಾಲೇಜಿನ ಪ್ರಾಧ್ಯಾಪಕ ಡಾ.ಕೊಟಗಿ ತಿಪ್ಪೇರುದ್ರ ಅವರು ಮಾತನಾಡಿ ಶತಮಾನ ಕಳೆದರೂ ಪರಿಷತ್ತು ಇಂದಿಗೂ ಪ್ರಸ್ತುತತೆ ಪಡೆದಿದೆ. ಸಾಹಿತ್ಯ ಮತ್ತು ಸಂಸ್ಕೃತಿಗೆ ಸಂಬಂಧಿಸಿದಂತೆ ನಿರಂತರ ಕಾರ್ಯ ಚಟುವಟಿಕೆಗಳನ್ನು ನಡೆಸುತ್ತ ಬಂದಿದೆ. ಇಂದು ಇದರ ಆಜೀವ ಸದಸ್ಯರ ಸಂಖ್ಯೆ ಮೂರು ಲಕ್ಷ ಮುವ್ವತ್ತು ಸಾವಿರವನ್ನು ದಾಟಿದೆ.ಈ 105 ವರ್ಷಗಳಲ್ಲಿ ಬಿಂದುವಿನಿಂದ ಸಿಂದುವಿನ ಕಡೆಗೆ ಸಾಗಿ,ಇಡೀ ದೇಶದಲ್ಲಿ ನಿರಂತರ ಕ್ರಿಯಾಶೀಲತೆಯನ್ನು ಶತಮಾನಗಳ ಕಾಲ ಪ್ರಕಟಿಸಿದ ಏಕಮಾತ್ರ ಸಂಸ್ಥೆ ಕನ್ನಡ ಸಾಹಿತ್ಯ ಪರಿಷತ್ತು. ಪರಿಷತ್ತು ಸಾಮಾನ್ಯರಿಂದ ವಿದ್ವಾಂಸರವರೆಗೆ ಪ್ರೀತಿಗೆ ಪಾತ್ರವಾಗಿದೆ ಎಂದು ಹೇಳಿದರು. ಈ ಕಾರ್ಯಕ್ರಮದಲ್ಲಿ ಕಸಾಪ ಜಿಲ್ಲಾ ಉಪಾಧ್ಯಕ್ಷ ರಮೇಶ್‌ಗೌಡ ಪಾಟೀಲ್, ಗೌರವ ಕಾರ್ಯದರ್ಶಿಗಳಾದ ಕೋಳೂರು ಚಂದ್ರಶೇಖರಗೌಡ, ವೀರೇಶ್ ಕರಡಕಲ್, ಕೋಶಾಧ್ಯಕ್ಷ ಟಿ.ಎಂ.ಪಂಪಾಪತಿ, ಹೆಚ್.ಕೆ.ಗೌರಿಶಂಕರ್, ಸಿದ್ಮಲ್ ಮಂಜುನಾಥ, ಕೆ.ಜಗದೀಶ್, ಶಿವಾನಂದ ಕತಕನಹಳ್ಳಿ, ಮಂಜುನಾಥಗೋವಿಂದವಾಡ, ತಿಪ್ಪೇರುದ್ರಪ್ಪ ಕೊಟಗಿ, ಸಿ.ಎಂ.ಮಂಜುನಾಥ, ಬಿ.ರಮಣಪ್ಪ, ಪದಾಧಿಕಾರಿಗಳು ಹಾಜರಿದ್ದರು.

# ಜಿಲ್ಲೆಯ 1451 ವರದಿ ನೆಗೆಟಿವ್, 109 ವರದಿ ಬಾಕಿ

ಯಾದಗಿರಿ, ಮೇ 09 : ನೋವೆಲ್ ಕೊರೊನಾ ವೈರಸ್ ಪರೀಕ್ಷೆಗಾಗಿ ಜಿಲ್ಲೆಯಿಂದ ಕಳುಹಿಸಿದ್ದ ಮಾದರಿಗಳ ಪೈಕಿ ಮೇ 9ರವರೆಗೆ ಒಟ್ಟು 1,451 ಮಾದರಿಗಳ ವರದಿ ನೆಗೆಟಿವ್ ಬಂದಿವೆ. ಜಿಲ್ಲೆಯಲ್ಲಿ ಶನಿವಾರ ಕಳುಹಿಸಲಾದ 35 ಹೊಸ ಮಾದರಿಗಳು ಸೇರಿದಂತೆ 109 ಮಾದರಿಗಳ ವರದಿ ಬರಬೇಕಿದೆ ಎಂದು ಅಪರ ಜಿಲ್ಲಾಧಿಕಾರಿಗಳಾದ ಪ್ರಕಾಶ್ ಜಿ.ರಜಪೂತ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಹೊಸ ಜಿಲ್ಲಾಸ್ಪತ್ರೆಯ ಐಸೊಲೇಷನ್ ವಾರ್ಡ್‌ನಲ್ಲಿ 5 ಜನರನ್ನು ಪತ್ಯೇಕವಾಗಿರಿಸಲಾಗಿದೆ. ಸುರಪುರ ಸೂಪರ್ ಕ್ವಾರಂಟೈನ್ ಸೆಂಟರ್‌ನಲ್ಲಿ 42 ಜನರನ್ನು ಅವಲೋಕನೆಗಾಗಿ ಇರಿಸಲಾಗಿದೆ. ಪ್ರಾಥಮಿಕ ಸಂಪರ್ಕದಲ್ಲಿದ್ದವರು 22 ಜನ, ದ್ವಿತೀಯ ಸಂಪರ್ಕದಲ್ಲಿದ್ದವರು 63 ಜನರಿದ್ದು, ಇವರನ್ನು ಪ್ರತ್ಯೇಕವಾಗಿರಿಸಲಾಗಿದೆ. ವಿದೇಶಗಳಿಂದ ಜಿಲ್ಲೆಗೆ ಮರಳಿ ಬಂದಿರುವ 71 ಜನರ ಅವಲೋಕನ ಅವಧಿ ಪೂರ್ಣಗೊಂಡಿದೆ ಎಂದು ಅವರು ಮಾಹಿತಿ ನೀಡಿದ್ದಾರೆ.

*ಇನ್‌ಸ್ಟಿಟ್ಯೂಶನಲ್ ಕ್ವಾರಂಟೈನ್‌ನಲ್ಲಿ 390 ಜನ*: ಜಿಲ್ಲೆಯ ಗುಂಜನೂರ ಇನ್‌ಸ್ಟಿಟ್ಯೂಶನಲ್ ಕ್ವಾರಂಟೈನ್‌ನಲ್ಲಿ 21 ಜನ, ಹುಣಸಗಿ ಮೊರಾರ್ಜಿ ದೇಸಾಯಿ ವಸತಿ ಶಾಲೆಯಲ್ಲಿ 139 ಜನ, ಕೆಂಭಾವಿ ಮೊರಾರ್ಜಿ ದೇಸಾಯಿ ವಸತಿ ಶಾಲೆಯಲ್ಲಿ 17 ಜನ, ವಡಗೇರಾ ಮೊರಾರ್ಜಿ ದೇಸಾಯಿ ವಸತಿ ಶಾಲೆಯಲ್ಲಿ 163 ಜನ ಮತ್ತು ರಾಜನಕೊಳ್ಳೂರಿನಲ್ಲಿ 50 ಜನ ಸೇರಿದಂತೆ ಒಟ್ಟು 390 ಜನರನ್ನು ಇನ್‌ಸ್ಟಿಟ್ಯೂಶನಲ್ ಕ್ವಾರಂಟೈನ್‌ನಲ್ಲಿ ಇರಿಸಲಾಗಿದೆ. ಅರಕೇರಾ (ಕೆ) ಇನ್‌ಸ್ಟಿಟ್ಯೂಶನಲ್ ಕ್ವಾರಂಟೈನ್‌ನಲ್ಲಿದ್ದ 50 ಜನರನ್ನು ಶನಿವಾರ ಬಿಡುಗಡೆ ಮಾಡಲಾಗಿದೆ ಎಂದು ಅವರು ತಿಳಿಸಿದ್ದಾರೆ.

ಜಿಲ್ಲಾಡಳಿತದ ಕಂಟ್ರೋಲ್ ರೂಮ್ ಸಹಾಯವಾಣಿ ಸಂಖ್ಯೆ 08473-253950 ಗೆ ಬರುವ ಕರೆಗಳಿಗಾಗಿ 3 ಸಿಬ್ಬಂದಿಗಳನ್ನು ಮೀಸಲಿರಿಸಿದ್ದು, ಶನಿವಾರ 11 ಕರೆಗಳು ಸ್ವೀಕೃತವಾಗಿವೆ. ಜಿಲ್ಲೆಯಲ್ಲಿ ಇದುವರೆಗೆ ಯಾವುದೇ ಖಚಿತ ಕೊರೊನಾ ವೈರಸ್ ಪ್ರಕರಣ ಪತ್ತೆಯಾಗಿರುವುದಿಲ್ಲ. ವೈರಸ್ ತಡೆಗೆ ಜಿಲ್ಲಾಡಳಿತವು ಸೂಕ್ತ ಮುಂಜಾಗ್ರತಾ ಕ್ರಮಗಳನ್ನು ಕೈಗೊಂಡಿದ್ದು, ಸಾರ್ವಜನಕರು ಆತಂಕಪಡಬಾರದು ಅವರು ಮನವಿ ಮಾಡಿದ್ದಾರೆ

ಸಾರ್ವಜನಕರಲ್ಲಿ ಮನವಿ*: ಕೋವಿಡ್-19 ಪೀಡಿತ ದೇಶಗಳಿಂದ ಹಿಂತಿರುಗಿರುವ ಅಥವಾ ಸೋಂಕಿತ ವ್ಯಕ್ತಿಯ ಸಂಪರ್ಕದಲ್ಲಿರುವ ಯಾರಾದರು ಭಾರತಕ್ಕೆ ಹಿಂತಿರುಗಿದ ದಿನದಿಂದ 14 ದಿನಗಳವರೆಗೆ ರೋಗ ಲಕ್ಷಣಗಳು ಇರಲಿ ಅಥವಾ ಇಲ್ಲದಿರಲಿ ಮನೆಯಲ್ಲಿ ಪ್ರತ್ಯೇಕವಾಗಿರಬೇಕು ಹಾಗೂ ಹತ್ತಿರದ ಸರ್ಕಾರಿ ಆಸ್ಪತ್ರೆಗೆ ವರದಿ ಮಾಡಿಕೊಳ್ಳಬೇಕು. ಜಿಲ್ಲಾಡಳಿತದ ಕಂಟ್ರೋಲ್ ರೂಮ್ ಸಹಾಯವಾಣಿ ಸಂಖ್ಯೆ 08473-253950 ಅಥವಾ ವಾಟ್ಸ್ಆ?ಯಪ್ ಸಂಖ್ಯೆ:9449933946 ಅಥವಾ 24*7 ಉಚಿತ ಆರೋಗ್ಯ ಸಹಾಯವಾಣಿ 104ಕ್ಕೆ ಕರೆ ಮಾಡಬಹುದು ಎಂದು ಅವರು ತಿಳಿಸಿದ್ದಾರೆ. ಸಾರ್ವಜನಕರು ವೈಯಕ್ತಿಕ ಸ್ವಚ್ಛತೆಯನ್ನು ಕಾಪಾಡಿಕೊಳ್ಳಬೇಕು. ಕೆಮ್ಮುವಾಗ ಅಥವಾ ಸೀನುವಾಗ ಕರವಸ್ತ್ರ/ಟಿಶ್ಯೂ ಪೇಪರನ್ನು ಬಳಸಿ. ಕೈ ಸ್ವಚ್ಛಗೊಳಿಸುವ ದ್ರಾವಣ ಅಥವಾ ನೀರು ಮತ್ತು ಸೋಪು ಬಳಸಿ ಆಗಾಗ ಕೈಗಳನ್ನು ತೊಳೆದುಕೊಳ್ಳಿ ಮತ್ತು ಸಾಮಾಜಿಕ ಸಮೂಹ ಗುಂಪು ಸೇರುವುದನ್ನು ಮಾಡಬಾರದು ಎಂದು ಅವರು ಸಲಹೆ ನೀಡಿದ್ದಾರೆ.